# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು – 572 103

ದೂರವಾಣಿ: 0816-2254546, 0816-2255596, 0816-2255597 ಫ್ಯಾಕ್ಸ್: 0816-2270719


ಸಂಖ್ಯೆ:ತು.ವಿ.ಕ.ಕಾ.ಬಯೋಮೆಟ್ರಿಕ್:ಖ.ಕೋ:2022-23/ 4923 ದಿನಾಂಕ: 17.01.2023

## ದರಪಟ್ಟಿ ಆಹ್ವಾನ (ವಿ.ವಿ ವೆಬ್ ಸೈಟ್ ಮುಖಾಂತರ)

ವಿಷಯ: ತುಮಕೂರು ವಿಶ್ವವಿದ್ಯಾನಿಲಯದ ಕಲಾ ಕಾಲೇಜಿಗೆ ಬಯೋಮೆಟ್ರಿಕ್ ಯಂತ್ರ ಖರೀದಿ ಸಂಬಂಧ ದರಪಟ್ಟಿಗಳನ್ನು ಆಹ್ವಾನಿಸುವ ಕುರಿತು.

ಉಲ್ಲೇಖ: 1. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು ಇವರ ಮನವಿ ಪತ್ರದ ದಿನಾಂಕ:19.12.2022

2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 01.01.2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ಕಲಾ ಕಾಲೇಜಿಗೆ ಬಯೋಮೆಟ್ರಿಕ್ ಯಂತ್ರವನ್ನು ಖರೀದಿಸುವ ಸಂಬಂಧ ಉಲ್ಲೇಖ(01)ರ ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು ಇವರ ಮನವಿಯ ಮೇರೆಗೆ ಉಲ್ಲೇಖ(02) ರ ಆದೇಶದ ಮೇರೆಗೆ ಕೆಳಕಂಡ ಷರತ್ತುಗಳಿಗೊಳಪಟ್ಟು ಆಸಕ್ತ ನೋಂದಾಯಿತ ಸಂಸ್ಥೆಗಳಿಂದ ಈ ಕೆಳಗಿನ ಕೋಷ್ಟಕದಲ್ಲಿ ತಿಳಿಸಿರುವಂತೆ ದರಪಟ್ಟಿಗಳನ್ನು ಸಆಹ್ವಾನಿಸಲಾಗಿದೆ.

| SL. No | Item with Specification | Quantity | Rate per Unit in Rs. (incl.All taxes) |
|---|---|---|---|
| 1 | • CPU 32 bit Microcontroller running at 200 MHz<br>• Memory 8GB Data flash, 2MB RAM.<br>• Finger Print Module 1 GHz, 32bit, Dedicated DSP processor with 256 bit AES finger print data encryption.<br>• Finger Print Sensor Most rugged and accurate optical fingerprint sensor.<br>• Tamper Detect 3 axis accelerometer for tamper detection. | 01 | |

ಷರತ್ತುಗಳು:

1. ಮುಚ್ಚಿದ ಲಕೋಟೆಯ ಮೇಲೆ ಕಲಾ ಕಾಲೇಜಿಗೆ ಬಯೋಮೆಟ್ರಿಕ್ ಯಂತ್ರ ಸರಬರಾಜು ಸಂಬಂಧ ದರಪಟ್ಟಿ" ಎಂದು ನಮೂದಿಸುವುದು.
2. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 27.01.2023 ಅಪರಾಹ್ನ 12.30 ಗಂಟೆ.
3. ದರಪಟ್ಟಿಯನ್ನು ದಿನಾಂಕ: 27.01.2023 ರಂದು ಅಪರಾಹ್ನ 4.00ಕ್ಕೆ ತೆರೆಯಲಾಗುವುದು.
4. ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್.ರಸ್ತೆ ತುಮಕೂರು-572 103, ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ಕಲುಹಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
5. ಸರಬರಾಜು ಸಂಸ್ಥೆಯವರು ತಮ್ಮ ಸಂಸ್ಥೆಯ GST No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯೊಂದಿಗೆ ಲಗತ್ತಿಸತಕ್ಕದ್ದು.
6. ಸರಬರಾಜು ಮಾಡಲು ಯಾವುದೇ ಮುಂಗಡವನ್ನು ನೀಡಲಾಗುವುದಿಲ್ಲ."
7. ದರಪಟ್ಟಿಯಲ್ಲಿ ನಮೂದಿಸಿರುವ ದರಗಳು ತೆರಿಗೆ ಹಾಗೂ ಸೇವೆಯ ಮೊತ್ತವನ್ನು ಒಳಗೊಂಡಿರತಕ್ಕದ್ದು.
8. ದರಪಟ್ಟಿಯನ್ನು ಅಂಗೀಕರಿಸುವಾಗ ಸಂಸ್ಥೆಗಳು ಸಲ್ಲಿಸಿದ ದರಪಟ್ಟಿಯ ಸರಾಸರಿ ಮೊತ್ತವನ್ನು ಪರಿಗಣಿಸಲಾಗುವುದು.
9. ಸರಬರಾಜುದಾರರು ನಮೂದಿಸುವ ದರಗಳು ಮೂರು ತಿಂಗಳ ಅವಧಿಯವರೆಗೆ ಚಾಲ್ತಿಯಲ್ಲಿರಬೇಕು.

10. ಸರಬರಾಜುದಾರರು ಈಗಾಗಲೇ ಸರಬರಾಜು ಮಾಡುತ್ತಿರುವ ಸಂಸ್ಥೆಗಳ ವಿವರಗಳನ್ನು ಮತ್ತು ಅವುಗಳ ದಾಖಲೆಗಳನ್ನು ಲಗತ್ತಿಸುವುದು.
11. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ರಚಿಸಿಕೊಂಡಿರುವ ನಿಯಮಾವಳಿಗೆ ಬದ್ಧವಾಗಿ ಆಯ್ಕೆ ಮಾಡಲಾಗುವುದು ಮತ್ತು ಇದರಲ್ಲಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾಗಿರುತ್ತದೆ.
12. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
13. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
14. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ,

18/01/2023

ಉಪಕುಲಸಚಿವರು
(ಸಾಮಾನ್ಯ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಂ ಅನಾಲಿಸ್ಟ್ ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.(ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸತಕ್ಕದ್ದು.)
3. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಛೇರಿ ಪ್ರತಿ.